**Akashvani : Bangalore**
**Regional Bulletin In Kannada**
**30.11.2024 / 18.40 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ಬಾಣಂತಿಯರ ಸಾವಿನ ಪ್ರಕರಣ ; ಸಾವನ್ನಪ್ಪಿದವರ ಕುಟುಂಬಕ್ಕೆ ೨ ಲಕ್ಷ ಪರಿಹಾರ ನೀಡಲು ಮುಖ್ಯಮಂತ್ರಿ ಸೂಚನೆ**

**೨. ಮಾದಕ ವಸ್ತುಗಳ ದಂದೆ ಪತ್ತೆಯಾದರೆ ಪೊಲೀಸರೇ ಹೊಣೆ - ಗೃಹ ಸಚಿವ ಡಾ. ಜಿ. ಪರಮೇಶ್ವರ್ ಎಚ್ಚರಿಕೆ**

**೩. ಸಂಕ್ರಾತಿ ಬಳಿಕ ಜೆಡಿಎಸ್ ಪಕ್ಷ ಸಂಘಟನೆ - ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ**

**೪. ಚಿಕ್ಕಮಗಳೂರು ಜಿಲ್ಲೆಯಲ್ಲಿ ಮುಂದುವರೆದ ನಕ್ಸಲ್ ವಿರುದ್ಧ ಕಾರ್ಯಾಚರಣೆ**

**೫. ಫೆಂಗಲ್ ಚಂಡಮಾರುತ ಹಿನ್ನೆಲೆ ; ಬೆಂಗಳೂರಿನಲ್ಲಿ ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಬಿಬಿಎಂಪಿ ಆಯುಕ್ತರ ಆದೇಶ**

**<><*<><>*><>**

ಬಳ್ಳಾರಿ ಜಿಲ್ಲೆಯಲ್ಲಿ ಬಾಣಂತಿಯರ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಗೃಹ ಕಚೇರಿ ಕೃಷ್ಣಾದಲ್ಲಿ ಪರಿಶೀಲನಾ ಸಭೆ ನಡೆಸಿದರು. ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹಮ್ಮದ್ ಸೇರಿದಂತೆ ಅಧಿಕಾರಿಗಳು ಭಾಗಿಯಾಗಿದ್ದರು. ಸಭೆಯ ಬಳಿಕ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಾವನ್ನಪ್ಪಿದ ಬಾಣಂತಿಯರ ಕುಟುಂಬಕ್ಕೆ ಸರ್ಕಾರದಿಂದ ತಲಾ ೨ ಲಕ್ಷ ರೂಪಾಯಿ ಪರಿಹಾರ ನೀಡುವುದಾಗಿ ತಿಳಿಸಿದ್ದಾರೆ. ಕಂಪನಿಯಿಂದಲೂ ಪರಿಹಾರ ನೀಡಲು ಸೂಚನೆ ನೀಡಲಾಗಿದೆ ಎಂದು ಹೇಳಿದ್ದಾರೆ. ಪಶ್ಚಿಮ ಬಂಗಾಳದ ಕಂಪನಿಯನ್ನು ಕಪ್ಪು ಪಟ್ಟಿಗೆ ಸೇರಿಸಲಾಗಿದೆ. ಆಸ್ಪತ್ರೆಗೆ ಸರಬರಜಾಗಿರುವ ಔಷಧಿಯನ್ನು ಹಿಂಪಡೆಯಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ಮಾದಕವಸ್ತು ಜಾಲದ ವಿರುದ್ಧ ರಾಜ್ಯ ಸರ್ಕಾರ ಸಮರ ಸಾರಿದ್ದು, ಮಾದಕವಸ್ತು ಪೂರೈಸುವ ಪೆಡ್ಲರ್‌ಗಳ ವಿರುದ್ಧ ಯಾವುದೇ ಮುಲಾಜಿಲ್ಲದೆ ಕಠಿಣ ಕ್ರಮ ಕೈಗೊಳ್ಳುವಂತೆ ಪೊಲೀಸ್ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಪೊಲೀಸ್ ವಸತಿಗೃಹ ಹಾಗೂ ನೂತನ ಠಾಣಾ ಕಟ್ಟಡಗಳ ಉದ್ಘಾಟನೆ ನೆರವೇರಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ಒಂದು ವರ್ಷದಲ್ಲಿ ರಾಜ್ಯದಲ್ಲಿ ೨೫೦ ಕೋಟಿ ರೂಪಾಯಿ ಮೌಲ್ಯದ ಮಾದಕದ್ರವ್ಯ ವಶಪಡಿಸಿ ನಾಶಪಡಿಸಲಾಗಿದೆ ಎಂದು ಹೇಳಿದ್ದಾರೆ. ಮಾದಕವಸ್ತು ದಂಧೆ ಪತ್ತೆಯಾದರೆ ಅದಕ್ಕೆ ಪೊಲೀಸರನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಪರಮೇಶ್ವರ್ ಎಚ್ಚರಿಕೆ ನೀಡಿದ್ದಾರೆ.

**<><*<><>*><>**

ಚನ್ನಪಟ್ಟಣ ವಿಧಾನಸಭೆ ಉಪಚುನಾವಣೆಯ ಬಳಿಕ ಜೆಡಿಎಸ್ ನಿಂದ ಇಂದು ಕ್ಷೇತ್ರದ ಮತದಾರರಿಗೆ ಕೃತಜ್ಞತಾ ಸಮಾವೇಶ ಆಯೋಜಿಸಲಾಗಿತ್ತು. ಕೇಂದ್ರ ಸಚಿವ ಎಚ್..ಡಿ. ಕುಮಾರಸ್ವಾಮಿ, ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ಹಾಗೂ ಪಕ್ಷದ ಅಭ್ಯರ್ಥಿಯಾಗಿದ್ದ ನಿಖಿಲ್ ಕುಮಾರಸ್ವಾಮಿ, ಉಪಸ್ಥಿತರಿದ್ದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕುಮಾರಸ್ವಾಮಿ, ಉಪಚುನಾವಣೆಯಲ್ಲಿ ೮೦ ಸಾವಿರಕ್ಕೂ ಹೆಚ್ಚು ಮತಗಳನ್ನು ನಿಖಿಲ್ ಕುಮಾರಸ್ವಾಮಿ ಪಡೆದಿದ್ದಾರೆ. ಇದಕ್ಕಾಗಿ ಮತದಾರರಿಗೆ ಕೃತಜ್ಞತೆ ಸಲ್ಲಿಸುವುದು ನಮ್ಮ ಕರ್ತವ್ಯ.

ಸೋಲು ಕಂಡ ಹೊರತಾಗಿಯೂ ನಮ್ಮ ನಿರೀಕ್ಷೆ ಮೀರಿ ಜನಬೆಂಬಲ ನಮಗೆ ದೊರೆತಿದ್ದು, ಸಾರ್ವತ್ರಿಕ ಚುನಾವಣೆಯಲ್ಲಿ ಜನ ನಮ್ಮ ಪರವಾಗಿ ನಿಲ್ಲುವ ವಿಶ್ವಾಸವಿದೆ ಎಂದರು. ನಿಖಿಲ್ ಕುಮಾರಸ್ವಾಮಿ ಮುಂದಿನ ಚುನಾವಣೆಯಲ್ಲಿ ಚನ್ನಪಟ್ಟಣದಿಂದಲೇ ಸ್ಪರ್ಧಿಸಬೇಕು ಎಂಬುದು ಕಾರ್ಯಕರ್ತರ ಒತ್ತಡವಿದೆ. ಸಂಕ್ರಾಂತಿಯ ಬಳಿಕ ಪಕ್ಷದ ಮರುಸಂಘಟನೆಗೆ ಕ್ರಮ ಕೈಗೊಳ್ಳುವುದಾಗಿ ತಿಳಿಸಿದ್ದಾರೆ.

**<><*<><>*><>**

ನಕ್ಸಲ್ ನಾಯಕ ವಿಕ್ರಂ ಗೌಡನ ಹತ್ಯೆ ಬಳಿಕ ನಕ್ಸಲರ ಹಾದಿ ಕಠಿಣವಾಗಿದ್ದು, ಆತನ ಸಹಚರರಿಗೆ ಸಮಾಜದ ಮುಖ್ಯವಾಹಿನಿಗೆ ಬರಲು ಶರಣಾಗಲು ಸರ್ಕಾರ ಅವಕಾಶ ನೀಡಿದೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಗೃಹಸಚಿವ ಡಾ.ಜಿ.ಪರಮೇಶ್ವರ್ ನಕ್ಸಲರು ತಮ್ಮ ನಿಲುವು ಬದಲಿಸುವುದು ಒಳಿತು ಎಂದು ಅಭಿಪ್ರಾಯಪಟ್ಟಿದ್ದಾರೆ. ಶರಣಾಗುವ ನಕ್ಸಲರಿಗೆ ಸರ್ಕಾರ ಪ್ಯಾಕೇಜ್ ಘೋಷಣೆ ಮಾಡಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಹಾಸನದಲ್ಲಿ ಕಾಂಗ್ರೆಸ್ ನಡೆಸುವ ಸ್ವಾಭಿಮಾನ ಸಮಾವೇಶಕ್ಕೆ ಯಾರ ಅಸಮಾಧಾನವೂ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ಚಿಕ್ಕಮಗಳೂರು ಜಿಲ್ಲೆಯಲ್ಲಿ ನಕ್ಸಲ್ ಕೂಂಬಿಂಗ್ ಕಾರ್ಯಚರಣೆ ಮುಂದುವರೆಸಲಾಗಿದೆ. ಜಿಲ್ಲೆಯ ಶೃಂಗೇರಿ ತಾಲೂಕಿನ ಕಿಗ್ಗಾ, ಕೆರೆಕಟ್ಟೆ. ಸುತ್ತಿನಗುಡ್ಡ ಹಾಗು ಕುದುರೆಮುಖ ಅರಣ್ಯ ವ್ಯಾಪ್ತಿಯಲ್ಲಿ ನಕ್ಸಲ್ ನಿಗ್ರಹ ಪಡೆಯಿಂದ ಕೂಂಬಿಂಗ್ ಕಾರ್ಯಾಚರಣೆ ನಡೆಯುತ್ತಿದೆ. ಜಿಲ್ಲೆಯ ಗಡಿಯಂಚಿನ ಚೆಕ್ ಪೋಸ್ಟ್‌ಗಳಲ್ಲಿ ವಾಹನಗಳ ತಪಾಸಣೆ ಮಾಡಲಾಗುತ್ತಿದೆ. ಉಡುಪಿ, ದಕ್ಷಿಣ ಕನ್ನಡ, ಶಿವಮೊಗ್ಗ ಜಿಲ್ಲೆಗಳ ಅರಣ್ಯ ವ್ಯಾಪ್ತಿಗಳಲ್ಲಿ ನಕ್ಸಲರಿಗಾಗಿ ಶೋಧ ಕಾರ್ಯ ನಡೆಸಲಾಗುತ್ತಿದೆ. ಕಳೆದ ವಾರ ನಕ್ಸಲ್ ವಿಕ್ರಂಗೌಡ ಎನ್‌ಕೌಂಟರ್ ಬಳಿಕ ಸುಮಾರು ೩ ಮಂದಿ ನಕ್ಸಲರು ಅರಣ್ಯದಲ್ಲಿ ತಪ್ಪಿಸಿಕೊಂಡಿದ್ದಾರೆ. ಮುಂಡಗಾರು ಲತಾ, ಜಯಣ್ಣ, ವನಜಾಕ್ಷಿ ತಂಡ ಕಾಡಿನಲ್ಲಿ ಇರುವ ಅನುಮಾನವಿದ್ದು ಕೂಂಬಿಂಗ್ ಕಾರ್ಯ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

**<><*<><>*><>**

ನಕ್ಸಲ್ ನಾಯಕ ವಿಕ್ರಂ ಗೌಡನ ಹತ್ಯೆ ಬಳಿಕ ನಕ್ಸಲರ ಹಾದಿ ಕಠಿಣವಾಗಿದ್ದು, ಆತನ ಸಹಚರರಿಗೆ ಸಮಾಜದ ಮುಖ್ಯವಾಹಿನಿಗೆ ಬರಲು ಶರಣಾಗಲು ಸರ್ಕಾರ ಅವಕಾಶ ನೀಡಿದೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಗೃಹಸಚಿವ ಡಾ.ಜಿ.ಪರಮೇಶ್ವರ್ ನಕ್ಸಲರು ತಮ್ಮ ನಿಲುವು ಬದಲಿಸುವುದು ಒಳಿತು ಎಂದು ಅಭಿಪ್ರಾಯಪಟ್ಟಿದ್ದಾರೆ. ಶರಣಾಗುವ ನಕ್ಸಲರಿಗೆ ಸರ್ಕಾರ ಪ್ಯಾಕೇಜ್ ಘೋಷಣೆ ಮಾಡಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಹಾಸನದಲ್ಲಿ ಕಾಂಗ್ರೆಸ್ ನಡೆಸುವ ಸ್ವಾಭಿಮಾನ ಸಮಾವೇಶಕ್ಕೆ ಯಾರ ಅಸಮಾಧಾನವೂ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ಫೆಂಗಲ್ ಚಂಡಮಾರುತದ ಪರಿಣಾಮ ಬೆಂಗಳೂರಿನಲ್ಲಿ ಮಳೆಯಾಗುವ ಸಾಧ್ಯತೆಯಿದ್ದು, ಎಲ್ಲಾ ರೀತಿಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ವರ್ಚ್ಯುವಲ್ ಮೂಲಕ ಅಧಿಕಾರಿಗಳ ಸಭೆ ನಡೆಸಿದ ವೇಳೆ ಮಾತನಾಡಿದ ಅವರು, ಆಯಾ ವಲಯ ವ್ಯಾಪ್ತಿಯ ಎಲ್ಲಾ ನಿಯಂತ್ರಣ ಕೊಠಡಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಲು ನಿರ್ದೇಶನ ನೀಡಿದ್ದಾರೆ. ಫೆಂಗಲ್ ಚಂಡಮಾರುತದ ಪರಿಣಾಮ ನಗರದಲ್ಲಿ ನಾಲ್ಕೈದು ದಿನಗಳ ಕಾಲ ಮಳೆ ಬರುವ ಮುನ್ಸೂಚನೆಯಿದ್ದು, ಗಾಳಿ ಹೆಚ್ಚಾಗಿ ಬೀಸುವ ಸಾಧ್ಯತೆಯಿದೆ. ಈ ನಿಟ್ಟಿನಲ್ಲಿ ಮರ ಕಟಾವು ಮಾಡುವ ಎಲ್ಲಾ ೨೮ ತಂಡಗಳನ್ನು ಸನ್ನದ್ಧರಾಗಿರಬೇಕು ಎಂದು ತಿಳಿಸಿದ್ದಾರೆ. ಆಯಾ ವಲಯ ವ್ಯಾಪ್ತಿಯಲ್ಲಿ ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದ್ದಾರೆ.

**<><*<><>*><>**

ಬಿಬಿಎಂಪಿ ವ್ಯಾಪ್ತಿಯ ೧೩ ಕೆರೆಗಳ ಒತ್ತುವರಿ ತೆರವು ಮಾಡಲಾಗಿದ್ದು, ೨೪೨ ಕೋಟಿ ಮೌಲ್ಯದ ೭ ಎಕರೆ ಪ್ರದೇಶವನ್ನು ಪಾಲಿಕೆ ವಶಪಡಿಸಿಕೊಂಡಿದೆ. ಅರಣ್ಯ ಪರಿಸರ ಮತ್ತು ಹವಾಮಾನ ವೈಪರಿತ್ಯ ನಿರ್ವಹಣೆಯ ವಿಶೇಷ ಆಯುಕ್ತೆ ಪ್ರೀತಿ ಗೆಹ್ಲೋಟ್ ಬೆಂಗಳೂರಿನಲ್ಲಿ ಈ ವಿಷಯ ತಿಳಿಸಿದ್ದಾರೆ. ಹೈಕೋರ್ಟ್ ಆದೇಶದಂತೆ ಇದುವರೆಗೆ ೨೦೨ ಕೆರೆಗಳ ಪೈಕಿ ೧೬೨ ಕೆರೆಗಳ ಸರ್ವೇಕಾರ್ಯ ಪೂರ್ಣಗೊಂಡಿದೆ. ಅದರಲ್ಲಿ ೪೯ ಕೆರೆಗಳು ಒತ್ತುವರಿ ಮುಕ್ತವಾಗಿದೆ. ಮಹದೇವಪುರ ವಲಯದಲ್ಲಿ ದೊಡ್ಡನೇಕ್ಕುಂದಿ ಕೆರೆ, ವಿಭೂತಿಪುರ ಕೆರೆ, ಪೂರ್ವ ವಲಯದ ಕಗ್ಗದಾಸಪುರ ಕೆರೆ, ಬೊಮ್ಮನಹಳ್ಳಿ ವಲಯದ ಕೊಣನಕುಂಟೆ ಕೆರೆ, ಅರಕೆರೆ, ಸುಬ್ಬರಾಯನಕೆರೆ, ಯಲಹಂಕ ವಲಯದ ೭ ಕೆರೆಗಳ ಒತ್ತುವರಿಯನ್ನು ತೆರವುಗೊಳಿಸಲಾಗಿದೆ.

<><*<><>*><>

ಬೆಂಗಳೂರು ಮಹಾನಗರ ಪಾಲಿಕೆಯ ದಕ್ಷಿಣ ವಲಯ ವ್ಯಾಪ್ತಿಯಲ್ಲಿ ಬರುವ ಕತ್ತರಿಗುಪ್ಪೆ, ಆಡುಗೋಡಿ, ಹನುಮಂತನಗರ, ಗಣೇಶ ಮಂದಿರ, ಚಿಕ್ಕಲ್ಲಸಂದ್ರ ಸೇರಿದಂತೆ ಹಲವು ವಾರ್ಡ್‌ಗಳಲ್ಲಿ ಇಂದು ಫುಟ್‌ಪಾತ್ ಅತಿಕ್ರಮಣ ತೆರವು ಕಾರ್ಯಾಚರಣೆ ನಡೆಸಲಾಯಿತು. ಪಾಲಿಕೆಯು ಪ್ರತಿ ವಾರ ಸಾರ್ವಜನಿಕ ಕುಂದು ಕೊರತೆಗಳನ್ನು ಆಲಿಸುವ ಸಭೆ ನಡೆಸುತ್ತಿದ್ದು, ಈ ಸಭೆಗಳಲ್ಲಿ ಸಾರ್ವಜನಿಕರು ವ್ಯಕ್ತಪಡಿಸುತ್ತಿದ್ದಂತಹ ಸಮಸ್ಯೆಗಳಲ್ಲಿ ಫುಟ್‌ಪಾತ್ ಅತಿಕ್ರಮಣವು ಹೆಚ್ಚಾಗಿ ಕೇಳಿಬಂದಿದೆ. ಈ ಹಿನ್ನೆಲೆಯಲ್ಲಿ ಬೀದಿ ಬದಿ ವ್ಯಾಪಾರಿಗಳು ಪಾದಚಾರಿ ಮಾರ್ಗಗಳನ್ನು ಅತಿಕ್ರಮಿಸಿರುವುದನ್ನು ತೆರವುಗೊಳಿಸಲಾಯಿತು.

<><*<><>*><>

ಯಾದಗಿರಿ ಜಿಲ್ಲೆಯಲ್ಲಿ ತಾಯಿ-ಶಿಶು ಮರಣ ಪ್ರಮಾಣ ತಗ್ಗಿಸಲು ವೈದ್ಯಾಧಿಕಾರಿಗಳು ಹಾಗೂ ಆರೋಗ್ಯ ಇಲಾಖೆ ಸಿಬ್ಬಂದಿ ವಿಶೇಷ ಗಮನ ನೀಡುವಂತೆ ರಾಯಚೂರು ಲೋಕಸಭಾ ಸದಸ್ಯ ಜಿ.ಕುಮಾರ್ ನಾಯಕ್ ಸೂಚಿಸಿದ್ದಾರೆ. ಯಾದಗಿರಿ ನಗರದ ದಿಶಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ತಾಯಿ ಹಾಗೂ ಶಿಶು ಮರಣ ವಿಷಯವನ್ನು ಗಂಭೀರವಾಗಿ ಪರಿಗಣಿಸುವಂತೆ ಜಿಲ್ಲೆಯ ವೈದ್ಯಾಧಿಕಾರಿಗಳು ಹಾಗೂ ಆರೋಗ್ಯ ಇಲಾಖೆ ಸಿಬ್ಬಂದಿಗೆ ಸೂಚನೆ ನೀಡಿದ್ದಾರೆ. ಮುಂದಿನ ದಿನಗಳಲ್ಲಿ ಗರ್ಭಿಣಿ ತಾಯಿ-ಶಿಶುಮರಣ ಪ್ರಮಾಣ ತಗ್ಗಿಸುವ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು. ಸಾಂಸ್ಥಿಕ ಹೆರಿಗೆ ಬಗ್ಗೆ ಪ್ರೋತ್ಸಾಹಿಸಬೇಕು. ತಾಂಡಾ, ಹಟ್ಟಿ, ಹಿಂದುಳಿದ ಪ್ರದೇಶ, ಜಾಗೃತಿ ಇಲ್ಲದ ಸಮುದಾಯದಲ್ಲಿ ಅರಿವು ಮೂಡಿಸುವಂತೆ ಸಲಹೆ ನೀಡಿದ್ದಾರೆ.

<><*<><>*><>

ವಚನ ಚಳವಳಿ ೧೨ನೇ ಶತಮಾನದಲ್ಲಿ ಕನ್ನಡದಲ್ಲಿ ನಡೆದ ಬಹುದೊಡ್ಡ ಸಾಂಸ್ಕೃತಿಕ ಚಳವಳಿ ಎಂದು ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಡಿ.ವಿ ಪರಮಶಿವಮೂರ್ತಿ ತಿಳಿಸಿದ್ದಾರೆ. ಸಮಕಾಲಿನ ಸಂದರ್ಭದ ಜೊತೆ ಮುಖಾಮುಖಿ ವಿಷಯ ಕುರಿತ ರಾಜ್ಯ ಮಟ್ಟದ ಒಂದು ದಿನದ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದ ಅವರು, ೧೨ನೇ ಶತಮಾನದಲ್ಲಿ ಬಸವ ಹಾಗೂ ಬಸವಾದಿ ಶರಣ ಶರಣೆಯರು ಪ್ರತಿಪಾದನೆ ಮಾಡಿದ ಆಶಯಗಳೇ ಬಾಬಾ ಸಾಹೇಬ್ ಅಂಬೇಡ್ಕರ್ ರಚಿಸಿದ ಸಂವಿಧಾನದ ಮೂಲ ಆಶಯಗಳೇ ಆಗಿವೆ ಎಂದು ಹೇಳಿದ್ದಾರೆ.

<><*<><>*><>

ಭಾರತವು ವಿಶ್ವದಲ್ಲೇ ಅತ್ಯಂತ ಬೃಹತ್ ಪ್ರಜಾಸತ್ತಾತ್ಮಕ ರಾಷ್ಟ್ರವಾಗಿದ್ದು, ಸಂವಿಧಾನವು ಮತದಾನದ ಮೂಲಕ ಸರ್ಕಾರವನ್ನು ರಚಿಸುವ ಹಕ್ಕನ್ನು ಜನತೆಗೆ ನೀಡಿದೆ ಎಂದು ಶಾಲಾ ಶಿಕ್ಷಣ ಇಲಾಖೆ ವಿಷಯ ಪರಿವೀಕ್ಷಕ ಸುನೀಲ್ ಕುಮಾರ್ ತಿಳಿಸಿದರು. ತುಮಕೂರಿನಲ್ಲಿ ಆಯೋಜಿಸಲಾಗಿದ್ದ ರಾಷ್ಟ್ರೀಯ ಮತದಾರರ ದಿನಾಚರಣೆ ಪ್ರಯುಕ್ತ ಭಾರತ ಚುನಾವಣಾ ಆಯೋಗ, ಜಿಲ್ಲಾ ಪಂಚಾಯತ್ ಹಾಗೂ ಶಾಲಾ ಶಿಕ್ಷಣ ಇಲಾಖೆಯ ಸಹಯೋಗದಲ್ಲಿ ನಡೆದ ಜಿಲ್ಲಾ ಮಟ್ಟದ ಪ್ರಬಂಧ, ರಸಪ್ರಶ್ನೆ, ಚಿತ್ರಕಲಾ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಪ್ರಶಸ್ತಿ ಪತ್ರ ನೀಡಿ ಅವರು ಮಾತನಾಡಿದರು.

<><*<><>*><>

ವಿಜಯಪುರದ ಸರ್ಕಾರಿ ಬಾಲಕಿಯರ ಬಾಲ ಮಂದಿರ ಹಾಗೂ ಸರ್ಕಾರಿ ಬಾಲಕರ ಬಾಲ ಮಂದಿರಕ್ಕೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧ್ಯಕ್ಷರೂ ಆದ ವಿಜಯಪುರ ಜಿಲ್ಲಾಧಿಕಾರಿ ಟಿ.ಭೂಬಾಲನ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಾಲ ಮಂದಿರಗಳ ಮೂಲಭೂತ ಸೌಕರ್ಯ ಪರಿಶೀಲಿಸಿದ ಅವರು, ಬಾಲ ಮಂದಿರದಲ್ಲಿರುವ ಮಕ್ಕಳ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವಂತೆ ಸೂಚಿಸಿದರು. ಯಾವುದೇ ಕಾರಣಕ್ಕೂ ಮಕ್ಕಳಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು. ಕೌಶಲ್ಯತೆಯನ್ನು ಹೆಚ್ಚಿಸಲು ವಿದ್ಯಾಭ್ಯಾಸದ ಜೊತೆಗೆ ಪಠ್ಯೇತರ ಚಟುವಟಿಕೆಗಳಿಗೆ ಆದ್ಯತೆ ನೀಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

**<><*<><>*><>**

ಇನ್ನು ಹವಾವರ್ತಮಾನ,

ರಾಜ್ಯದಲ್ಲಿ ಈಶಾನ್ಯ ಮುಂಗಾರು ದುರ್ಬಲವಾಗಿತ್ತು. ನೈಋತ್ಯ ಬಂಗಾಳಕೊಲ್ಲಿಯಲ್ಲಿ ಉಂಟಾಗಿರುವ ವಾಯುಭಾರತ ಕುಸಿತದಿಂದ ರಾಜ್ಯದ ದಕ್ಷಿಣ ಒಳನಾಡಿನ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ರಾಮನಗರ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರು ಹಾಗೂ ಸುತ್ತಮುತ್ತ ಮೋಡ ಕವಿದ ವಾತಾವರಣವಿರಲಿದ್ದು, ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಕೆಲವು ಕಡೆಗಳಲ್ಲಿ ಮುಂಜಾನೆ ಮಂಜು ಮುಸುಕಿದ ವಾತಾವರಣವಿರುವ ಸಾಧ್ಯತೆಯಿದೆ. ಗರಿಷ್ಠ ೨೪, ಕನಿಷ್ಠ ೨೦ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ. ರಾಜ್ಯದಲ್ಲಿ ಗರಿಷ್ಠ ತಾಪಮಾನ ೩೪.೮ ಡಿಗ್ರಿ ಸೆಲ್ಸಿಯೆಸ್, ಕಾರವಾರದಲ್ಲಿ ಹಾಗೂ ಕನಿಷ್ಠ ತಾಪಮಾನ ೧೪.೨ ಡಿಗ್ರಿ ಸೆಲ್ಸಿಯೆಸ್ ಬೆಳಗಾವಿ ವಿಮಾನ ನಿಲ್ದಾಣದಲ್ಲಿ ದಾಖಲಾಗಿದೆ.

**<><*<><>*><>**

ಸಂಕ್ಷಿಪ್ತ ಸುದ್ದಿಗಳು

೧. ಸಾರ್ವಜನಿಕರು ಸರ್ಕಾರಿ ಕಚೇರಿಗಳಿಗೆ ತಮ್ಮ ಕೆಲಸ ಕಾರ್ಯಗಳಿಗೆ ಬಂದರೆ ಅಧಿಕಾರಿಗಳು ಸೂಕ್ತ ರೀತಿಯಲ್ಲಿ ಸ್ಪಂದಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**